ಕರ್ನಾಟಕ ವಿಧಾನಪರಿಷತ್ತು

ನೂರ ನಲವತ್ತ ಮೂರನೆಯ ಅಧಿವೇಶನದ ಮುಂದುವರೆದ ಉಪವೇಶನ

ಚುಕ್ಕೆ ರಹಿತ ಪ್ರಶ್ನೆ

ದಿನಾಂಕ : 26-03-2021 ಪ್ರಶ್ನೆ ಸಂಖ್ಯೆ : 1921(2287)

ಸದಸ್ಯರ ಹೆಸರು ಮತ್ತು ಕ್ಷೇತ್ರ : ಡಾ|| ವೈ. ಎ. ನಾರಾಯಣಸ್ವಾಮಿ(ಶಿಕ್ಷಕರ ಕ್ಷೇತ್ರ)

ಉತ್ತರ ನೀಡಬೇಕಾದ ದಿನಾಂಕ : 26-03-2021

ಉತ್ತರಿಸುವ ಸಚಿವರು: ಮಾನ್ಯ ಉಪ ಮುಖ್ಯಮಂತ್ರಿಗಳು ಹಾಗೂ ಸಾರಿಗೆ ಸಚಿವರು

ವಿಷಯ : ಬಸ್ಸುಗಳ ನಕಲಿ ನೋಂದಣಿ ಸಂಖ್ಯೆ ಬಗ್ಗೆ

(ಅ) ರಾಜ್ಯದಲ್ಲಿ ತೆರಿಗೆ ವಂಚಿಸುವ ನಿಟ್ಟಿನಲ್ಲಿ ನಕಲಿ ನೋಂದಣಿ ಸಂಖ್ಯೆ ಅಳವಡಿಸಿಕೊಂಡು ವಾಹನಗಳನ್ನು ಚಲಾಯಿಸುತ್ತಿರುವ ಅನೇಕ ಪ್ರಕರಣಗಳು ವರದಿಯಾಗುತ್ತಿದ್ದು, ಸರ್ಕಾರದ ಗಮನಕ್ಕೆ ಬಂದಿದೆಯೇ;

(ಆ) ಒಂದೇ ನೋಂದಣಿ ಅಡಿಯಲ್ಲಿ ಎರಡಕ್ಕಿಂತ ಹೆಚ್ಚು ಬಸ್ಸುಗಳನ್ನು ಚಲಾಯಿಸುತ್ತಿರುವ ಪ್ರಕರಣಗಳನ್ನು ಪತ್ತೆ ಹಚ್ಚಲಾಗಿದೆಯೇ; ಈವರೆವಿಗೂ ಎಷ್ಟು ಪ್ರಕರಣಗಳನ್ನು ಪತ್ತೆ ಹಚ್ಚಲಾಗಿದೆ; (ವಿವರಗಳನ್ನು ನೀಡುವುದು)

(ಇ) ಬೆಂಗಳೂರಿನಿಂದ ಮಂಗಳೂರು, ಉಡುಪಿ, ಬೆಳಗಾವಿ, ಹೈದ್ರಾಬಾದ್, ಮಣಿಪಾಲ್ ಈ ಬಸ್-ರೂಟ್‌ಗಳಲ್ಲಿ ಎಷ್ಟು ಪ್ರಕರಣಗಳನ್ನು ಪತ್ತೆ ಹಚ್ಚಲಾಗಿದೆ; (ವಿವರಗಳನ್ನು ನೀಡುವುದು)

(ಈ) ಹಾಗಿದ್ದಲ್ಲಿ, ಇವರ ವಿರುದ್ಧ ತೆಗೆದುಕೊಂಡ ಕ್ರಮಗಳೇನು;

(ಉ) ಇಂತಹ ಪ್ರಕರಣಗಳನ್ನು ತಡೆಯಲು ಸರ್ಕಾರ ಕೈಗೊಂಡ ಕ್ರಮವೇನು?